ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನವನ್ನು `CM Covid-19 Relief Fund ' ಗೆ ನೀಡುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

496 (621) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಪರಿಷ್ಕೃತ ಮಾರ್ಗಸೂಚಿ-2014 ರ ಕಂಡಿಕೆ – 2.13 ರಲ್ಲಿ ಪ್ರಕೃತಿ ವಿಪತ್ತು ಮತ್ತು ವಿಕೋಪದಡಿಯಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನವನ್ನು ಬಳಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆಯೇ;

(ಆ) ಕರೋನಾ ವೈರಸ್ (ಕೋವಿಡ್-19)ನ್ನು ನಿಯಂತ್ರಿಸಲು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿಯ ನಿಧಿಯನ್ನು 2020-21ನೇ ಸಾಲಿನಲ್ಲಿ ಮಾತ್ರ ಬಳಕೆ ಮಾಡಲು ಅನುಮತಿಸಲಾಗಿದಯೇ;

(ಇ) ಶಾಸಕರುಗಳು ಇಚ್ಛಿಸಿದಲ್ಲಿ ಸದರಿ ನಿಧಿಯನ್ನು ಮಾನ್ಯ ಮುಖ್ಯಮಂತ್ರಿಯವರ `CM Covid-19 Relief Fund ' ಗೆ ದೇಣಿಗೆ ನೀಡಲು ಅನುಮತಿಸಲಾಗಿದೆಯೇ;

(ಈ) ಸದರಿ ಆದೇಶದನ್ವಯ ರಾಜ್ಯಾದ್ಯಂತ ಒಟ್ಟು ಎಷ್ಟು ಶಾಸಕರು (ವಿಧಾನಸಭೆ/ವಿಧಾನಪರಿಷತ್) ಅನುದಾನವನ್ನು ಬಳಸಿಕೊಳ್ಳಲು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದಾರೆ; ಎಷ್ಟು ಜನ ಶಾಸಕರ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳು ಅನುಷ್ಠಾನಗೊಳಿಸಿ ಅನುದಾನವನ್ನು ಬಿಡುಗಡೆಗೊಳಿಸಿದ್ದಾರೆ?